ESTD : No. JRB/Cell.II/69/Regn-4876/77-78 ✆:080-26601442
Date : 09-12-1977

# ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ

THE BANGALORE CITY DIST. CO-OPERATIVE UNION LTD.,
' ಸಹಕಾರ ಭವನ ' ನಂ. 1/3, 3ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು–560 018
E-mail: bcdcu1977@gmail.com

## ಪ್ರಕಟಣೆಗಾಗಿ

ಬೆಂಗಳೂರು :– ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು ಮತ್ತು ನೇತಾಜಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ, ಬೆಂಗಳೂರು ಇವುಗಳ ಸಂಯುಕ್ತ ಆಶ್ರಯದಲ್ಲಿ ದಿನಾಂಕ: 10–12–2024 ರಂದು ಸಹಕಾರ ಸಂಘಗಳ ಪದಾಧಿಕಾರಿಗಳು ಹಾಗೂ ಸದಸ್ಯರುಗಳಿಗೆ ಒಂದು ದಿನದ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮವನ್ನು **ಭುವನೇಶ್ವರಿ ಒಕ್ಕಲಿಗರ ಮಹಿಳಾ ಸಂಘ ರಿ., ನಂ. 1, 4ನೇ ಅಡ್ಡರಸ್ತೆ, 1ನೇ ಮುಖ್ಯರಸ್ತೆಮ ಕನಕ ಲೇಔಟ್, ಬನಶಂಕರಿ 2ನೇ ಹಂತ ಕದಿರೇನಹಳ್ಳಿ ಪೆಟ್ರೋಲ್ ನಂಕ್ ಹಿಂಭಾಗ,** ಇಲ್ಲಿ ಏರ್ಪಡಿಸಲಾಗಿತ್ತು.

ಸಮಾರಂಭದ ಉದ್ಘಾಟನೆಯನ್ನು ನೇತಾಜಿ ಕ್ರೆಡಿಟ್ ಕೋ–ಆಪರೇಟಿವ ಸೊಸೈಟಿಯ ಅಧ್ಯಕ್ಷರಾದ ಶ್ರೀ ಟಿ.ಆರ್. ಗುರುರಾಜ್ ಇವರು ನೆರವೇರಿಸಿ ಮಾತನಾಡುತ್ತಾ, ಇತ್ತೀಚೆಗೆ ಸಹಕಾರ ಸಂಘಗಳಲ್ಲಿ ಚುನಾವಣೆಗಳು ಪ್ರಾರಂಭವಾಗುತ್ತಿದ್ದು, ಸಹಕಾರ ಸಂಘಗಳಲ್ಲಿ ಚುನಾವಣೆ ಕಾಯ್ದೆಗಳಲ್ಲಿ ಸಾಕಷ್ಟು ಬದಲಾವಣೆಗಳಾಗಿದ್ದು, ಅಂತಹ ಚುನಾವಣಾ ಕಾಯ್ದೆಗಳ ಕುರಿತು ಸಂಪೂರ್ಣ ಮಾಹಿತಿಗಳನ್ನು ಇಂದಿನ ತರಬೇತಿ ಕಾರ್ಯಕ್ರಮದಲ್ಲಿ ಸಹಕಾರ ಇಲಾಖೆಯ ಅಧಿಕಾರಿಗಳು ನೀಡಲಿದ್ದು, ಅದರ ಸಂಪೂರ್ಣ ಪ್ರಯೋಜನವನ್ನು ಪಡೆಯಬೇಕು ಹಾಗೂ ಸಹಕಾರ ಸಂಘಗಳ ಚುನಾವಣೆಗಳು ಸರಾಗವಾಗಿ ನಡೆಯಲು ಎಲ್ಲರೂ ಸಹಕರಿಸಬೇಕೆಂದು ತಿಳಿಸಿದರು.

ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿದ್ದ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರಾದ ಶ್ರೀ ಹೆಚ್.ಟಿ. ನಾಗೇಶ್‌ರವರು ಮಾತನಾಡುತ್ತಾ, ಸಹಕಾರ ಸಂಘಗಳ ಆಡಳಿತ ಮಂಡಳಿಗಳಲ್ಲಿ ಯುವಜನತೆಯು ಹೆಚ್ಚು ಹೆಚ್ಚು ಬರಬೇಕಾಗಿದ್ದು, ಸಹಕಾರ ಸಂಘಗಳ ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಶ್ರಮಿಸಬೇಕೆಂದು ಎಂದು ತಿಳಿಸಿದರು. ಮುಂದುವರೆದು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಮತ್ತು ಬೆಂಗಳೂರು ನಗರ ಜಿಲ್ಲಾ ಸಹಕಾರ ಯೂನಿಯನ್ನು ಇಂತಹ ತರಬೇತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವಲ್ಲಿ ಆಧ್ಯತೆಯ ಮೇರೆಗೆ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಂಡಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯಅತಿಥಿಗಳಾಗಿ ಆಗಮಿಸಿದಂತಹ ಶ್ರೀಮತಿ ಭಾಗ್ಯ ರಂಗಸ್ವಾಮಿಗೌಡರವರು ಮಾತನಾಡಿ, ಸಹಕಾರ ಸಂಘಗಳಲ್ಲಿ ಮಹಿಳೆಯರು ಇಂತಹ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಹಾಗೂ ಚುನಾವಣೆಗಳನ್ನು ಎದುರಿಸಿ ಪದಾಧಿಕಾರಿಗಳಾಗಿ ಆಯ್ಕೆಯಾಗಿ ಸಂಘದ ಚುಕ್ಕಾಣಿಯನ್ನು ಹಿಡಿಯಬೇಕಾಗಿ ಸಲಹೆ ನೀಡಿದರು.

............2

ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಆಗಮಿಸಿರುವಂತಹ ಸಹಕಾರ ಸಂಘಗಳ ಸಹಾಯಕ ನಿಬಂಧಕರಾದ ಶ್ರೀಮತಿ ನಳಿನಿ ಹೆಚ್.ಜಿ. ಇವರು ಸಹಕಾರ ಸಂಘಗಳಲ್ಲಿ ಚುನಾವಣೆ ವಿಧಿ ವಿಧಾನ ಕುರಿತು ಸಂಕ್ಷಿಪ್ತವಾಗಿ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಮತ್ತೊಬ್ಬ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಸ್ಟಾರ್ ವೆಂಕಟೇಶ್ ರವರು ವ್ಯಕ್ತಿತ್ವ ವಿಕಸನ ಮತ್ತು ಮಾನಸಿಕ ಒತ್ತಡಗಳ ನಿರ್ವಹಣೆ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಹಕಾರ ಸಂಘಗಳ ಅಧ್ಯಕ್ಷರು, ನಿರ್ದೇಶಕರು ಮತ್ತು ಸದಸ್ಯರು ಇದರ ಸದುಪಯೋಗಪಡಿಸಿಕೊಂಡರು. ಪ್ರಾರಂಭದಲ್ಲಿ ಒಕ್ಕೂಟದ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಸವಿತಾ ಬಿಸನಾಳ ಇವರು ಸರ್ವರನ್ನೂ ಸ್ವಾಗತಿಸಿ ಕಾರ್ಯಕ್ರಮದ ಪ್ರಾಸ್ತಾವಿಕ ಪರಿಚಯ ಮಾಡಿಕೊಟ್ಟರು ಹಾಗೂ ಕೊನೆಯಲ್ಲಿ ಸಂಘದ ಕಾರ್ಯದರ್ಶಿ ಶ್ರೀಮತಿ ಭಾರತಿ ಜಯರಾಮ ಇವರು ಎಲ್ಲರಿಗೂ ವಂದಿಸಿದರು.

ಸಹಿ/-
ಮುಖ್ಯಕಾರ್ಯನಿರ್ವಹಣಾಧಿಕಾರಿ.

